ಸದರೀ ದರಖಾಸ್ತುದಾರಳಾದ ಶ್ರೀರಂಗಮ್ಮನ ಅರ್ಜೀಯನ್ನು 1887ನೇ ಇಸವಿ ನವಂಬರ್ ತಿಂಗಳು ತಾರೀಖು 14ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಶ್ರೀನಿವಾಸಯ್ಯಂಗಾರ್ರ ಆಸ್ತಿಗೆ ಹಕ್ಕುದಾರರಾದ ಏಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1887ನೇ ಇಸವಿ ಅರ್ಜೀ ನಂಬರ್ 519.

ಮೃತಪಟ್ಟ ಸುಬ್ಬಮ್ಮನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಕೀತಮ್ಮನವರು ಮೃತಪಟ್ಟ ಸದರೀ ಸುಬ್ಬಮ್ಮನಿಗೆ————ಆಗಬೇಕೆಂಬ ಹಕ್ಕುದಾರೀ ಮೇಲೆ ಪೆರಿಯಾಪಟ್ಣ ದ ತಾಲ್ಲೂಕು ಬೆಟ್ಟದಪುರದ ಸ್ಥಳದ ಸದರೀ ಕೀತಮ್ಮನು ಅರಕಲ್‌ಗೂಡು ತಾ॥ ಹೊಸಹಳ್ಳಿ ವಾಸಸ್ಥಳಾಗಿ ಮೃತಪಟ್ಟ ಸುಬ್ಬಮ್ಮನವರ ಜಿಂದಗೀ ಬಗ್ಯಾಗಿ ಬರತಕ್ಕ 150 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ಕೀತಮ್ಮನ ಅರ್ಜೀಯನ್ನು 1887ನೇ ಇಸವಿ ನವಂಬರ್ ತಿಂಗಳು ತಾರೀಖು 14ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸುಬ್ಬಮ್ಮನವರ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1887ನೇ ಇಸವಿ ಅಕ್ಟೋಬರು ತಿಂಗಳು 10ನೇ ತಾರೀಖಿನಲ್ಲಿ ಕೋರ್ಟು ವೊಹರ್ ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಯಸ್. ಹೇವಾಜಿರಾವ್, ಡಿಸ್ಟ್ರಿಕ್ಟು ಜಡ್ಜ್.

ಮೈಸೂರು ಡಿಸ್ಟ್ರಿಕ್ಟು ಸಬ್ ಜಡ್ಜ್‌ರಯವರ ಕೋರ್ಟಿನಲ್ಲಿ.

ದಿವಾಳಿಯಾದ ಡಿಕ್ರಿ ದೇಣೇದಾರ ಶ್ರೀರಂಗಪಟ್ಣದ ತಾ॥ ಯೆಂಕಾರ್ ಕೊಪ್ಪಲ್‌ನಲ್ಲಿ ಇರುವ ವೆಂಕಟಪತಿ ಗೌಡನ ಹೆಂಡತಿ ತಿಮ್ಮಮ್ಮನ ವಿಷಯದಲ್ಲಿ—

ಸ್ಯ 1887ನೇ ಇಸವಿ ದಿವಾಳೀ ಕೇಸ್ ನಂಬರ್ 245.

ಹುಕ್ಕುಂ.

ಮೇಲ್ಕಂಡ ತಿಮ್ಮಮ್ಮನು, ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜೀ ಅಂಶವು ಈ ಕೋರ್ಟು ರೂಬರೂ ಅರ್ಜೀದ್ದಾರಳಾದ ತಿಮ್ಮಮ್ಮನು ಖುದ್ದು ಹಾಜರು ಮತ್ತು ಸದರೀಯವಳ ಲೇಣೇದಾರ್ರಾದ 2ನೇ ಕೆಂಪೇಗವುಡ ವುರಫ್ ಕಿದ್ದೇಗವುಡ ಹಾಜರ್ ಇವರಿಗೂ ದರ್ಯಾಫ್ತ್ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರ್ರು ತಮಗೆ ಈ ದರ್ಯಾಫ್ತ್ ನೋಟೀಸ್ ಜಾರೀಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿ ಹೋದರು ಯಾರಂದರೆ,—1ನೇ ವೆಂಕಟಪತಿ ವುರಫ್ ಶತ್ತೆ.

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನ ಸದರೀ ವೆಂಕಟಪತಿಗವುಡನ ಹೆಂಡತಿ ತಿಮ್ಮಮ್ಮನು ಹೊಂದುವದಕ್ಕೆ ಹಕ್ಕುದಾರಳಾಗುವದರ ಮೂಲಕ ದಿವಾಳಿಯಾದವಳೆಂದು ತೀರ್ಮಾನಿಸಲ್ಪಟ್ಟಿರುತ್ತೆಯಾಗಿ ಸದರೀ ದಿವಾಳಿಯಾದವಳನ್ನ ನಿರ್ಬಂಧದಿಂದ ವಿವೋಚನೆ ಮಾಡಿರುವದಲ್ಲದೆ ಇದಕ್ಕೆ ಲಗತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೂ ಸ್ತರವಾಗಿಯಾಗಲಿ ದಸ್ತಗಿರಿ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್ದಾರಿಯಿಂದ ಸಹ ಅವಳನ್ನ ನಿಖಾಲಸ್ ಮಾಡಲಾಗಿರುತ್ತೆಯೆಂದು ಇದರಿಂದ ಹುಕ್ಕುಂ ಮಾಡಲ್ಪಟ್ಟಿರುತ್ತೆ.

1887ನೇ ಇಸವಿ ಅಕ್ಟೋಬರ್ 14ನೇ ತಾರೀಖಿನಲ್ಲಿ ಈ ಕೋರ್ಟು ವೊಹರ್‌ನಮ್ಮ ದಸ್ತಖತ್ ಸಿಸಿ ಕೊಡಲ್ಪಟ್ಟಿತು.

ಸಾಲದಪಟ್ಟಿ.

ನಂಬರ್	ಲೇಣೇದಾರ್ರು ಅಥವಾ ದಾವಾದಾರ್ರ ಹೆಸರು ಮತ್ತು ವಿವರ ಮತ್ತು ಹಾಲೀ ತಿಳಿಯಬಂದ ಅವರುಗಳ ವಾಸಸ್ಥಳ.	ಸಾಲದ ಮೊತ್ತ	ಯಾವಾಗ ಲೇಣೇ ಕೊಟ್ಟಿದ್ದು	ದೇಣೆಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವಿ ಯೇನಾದರೂ ಇದ್ದರೆ.	ಷರಾ
1	ಶ್ರೀರಂಗಪಟ್ಣದ ತಾ॥ ಎಂಮೇಕಾರ್ ಕೊಪ್ಪಲಲ್ಲಿರುವ ವೆಂಕಟಪತಿಗೌಡ ವುರಫ್ ಶತ್ತೆ. ..	229 5 2	..	ಡಿಕ್ರೀ ಬಾಬತು	

ದಿವಾಳಿಯಾದ ಡಿಕ್ರೀ ದೇಣೇದಾರ ಮೈಸೂರು ದೇವರಾಜ ಮೊಹಲ್ಲಾದಲ್ಲಿರುವ ಜೋರಂಣನ ಮಗ ಜವರಯ್ಯನ ವಿಷಯದಲ್ಲಿ—

ಸ್ಯ 1887ನೇ ಇಸವಿ ದಿವಾಳೀ ಕೇಸ್ ನಂಬರು 3(12.

ಹುಕ್ಕುಂ.

ಮೇಲ್ಕಂಡ ಜವರಯ್ಯನು ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜೀ ಅಂಶವು ಈ ಕೋರ್ಟು ರೂಬರೂ ಅರ್ಜಿದಾರನಾದ ಜವರಯ್ಯನು ಖುದ್ದು ಹಾಜರು ಇವನನ್ನ ದರ್ಯಾಫ್ತೀ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರ್ರು ತಮಗೆ ಈ ದರ್ಯಾಫ್ತಿ ನೋಟೀಸ್ ಜಾರಿಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿಹೋದರು, ಯಾರಂದರೆ, 1 ಮೈಸೂರು ಬ್ಯಾಂಕ್ ಯೇಜಂಟ್ ಬಾಳಾಜಿರಾವ್ 2 ಧನಾಭಿವೃದ್ಧೀ ಬ್ಯಾಂಕ್.

ಸಿವಿಲ್ ಪ್ರೊಸಿಡ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನ ಸದರೀ ಜವರಯ್ಯನು ಹೊಂದುವದಕ್ಕೆ ಹಕ್ಕುದಾರನಾಗುವದರ ಮೂಲಕ ದಿವಾಳಿಯಾದವನೆಂದು ತೀರ್ಮಾನಿಸಲ್ಪಟ್ಟಿರುತ್ತದೆಯಾಗಿ ಸದರೀ ದಿವಾಳಿಯಾದವನ್ನ ನಿರ್ಬಂಧದಿಂದ ವಿವೇಚನೆ ಮಾಡಿರುವದಲ್ಲದೇ ಇದಕ್ಕೆ ಲಗ್ನತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೂ ಸ್ಕರವಾಗಿಯಾಗಲಿ ದಸ್ತಗಿರೀ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್ದಾರಿಯಿಂದ ಸಹ ಅವನ್ನ ನಿಖಾಲಸ್ ಮಾಡಲಾಗಿರುತ್ತೆ ಯಂದು ಇದರಿಂದ ಹುಕ್ಕುಂ ಮಾಡಲ್ಪಟ್ಟಿರುತ್ತೆ.

1887ನೇ ಇಸವಿ ಅಕ್ಟೋಬರ್ 12ನೇ ತಾರೀಖಿನಲ್ಲಿ ಕೋರ್ಟು ಮೊಹರ್ ನಮ್ಮ ದಸ್ತಖತ್ತಿನಿಂದ ಕೊಡೋಣಾಗಿದೆ.

ಸಾಲದಪಟ್ಟಿ.

ನಂಬರು.	ಲೇಣೇದಾರ್ರು ಅಥವಾ ದಾವಾದಾರ್ರ ಹೆಸರು ಮತ್ತು ವಿವರ ಮತ್ತು ಹಾಲೀ ತಿಳಿಯಬಂದ ಅವರುಗಳ ವಾಸಸ್ಥಳ.	ಸೊಬಲಗು.	ಇದಕ್ಕೆ ಯಾವಾಗ ಡಿಕ್ರೀ ಆಯಿತು.	ದೇಣೆಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವಿಯೇನಾದರೂ ಇದ್ದರೆ.	ಷರಾ.
1	ಮೈಸೂರು ಬ್ಯಾಂಕ್ ಯೇಜಂಟ್ ಬಾಳಾಜಿರಾವ್	30 0 0	..	ಡಿಕ್ರೀ ಬಾಬತು	

ಸಿ. ಶ್ರೀನಿವಾಸಯ್ಯಂಗಾರ್,
ಸಬ್ ಜಡ್ಜ್.

ಫಾರೆಸ್ಟ್ ಇಲಾಖೆ.

ತಾರೀಖು 13ನೇ ಅಕ್ಟೋಬರ್ 1887.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ದರಖಾಸ್ತು ಮಂಜೂರಾದ ತಾರೀಖು ಲಾಗಾಯಿತು 1889ನೇ ಇಸವಿ ಮಾರ್ಚೀ ಆಖೈರ್‌ವರಿಗೆ ಮೈಸೂರು ಡಿಸ್ಟ್ರಿಕ್ಟ್ ಹುಣಸೂರು ತಾಲ್ಲೂಕು ಬಾಬತು ಈ ಕೆಳಗೆ ನಮೂದಾಗುವ ಜಂಗಲ್‌ಗಳಿಂದ ಹುಣಸೂರ್ ಡಿಪೋಕ್ಕೆ ಚಿಲ್ಲರೇ ಚೌಬೀನೇ ಮತ್ತು ಗಳೂ ಸಹ ಹೇರಲು ಇಷ್ಟವುಳ್ಳವರು 1887ನೇ ಇಸವಿ ನವಂಬರ್ 15ನೇ ತಾರೀಖುವರಿಗೆ ಮೈಸೂರು ಡಿಸ್ಟ್ರಿಕ್ಟ್ ಫಾರೆಸ್ಟ್ ಸೂಪರ್‌ಟೆಂಡೆಂಟ್ ಸಾಹೇಬರವರ ಆಫೀಸಿಗೆ ದರಖಾಸ್ತು ಮಾಡಬಹುದು.

ದರಖಾಸ್ತುದಾರ ತಾನು ಗಾಡೀ ಬೋಜಾ 1ಕ್ಕೆ ಯಾವ ದರದಂತೆ ಚಿಲ್ಲರೇ ಚೌಬೀನಾ ಮತ್ತು ಬಿದರುಗಳು ಹೇರಲು ಒಪ್ಪುತ್ತಾನೋ ಆ ದರವನ್ನ ದರಖಾಸ್ತಿನಲ್ಲಿ ನಮೂದಿಸಬೇಕು.

1 ವೀರನ ಹೊಸಹಳ್ಳಿ ಜಂಗಲ್
2 ಕಬಕೂನಹಳ್ಳಿ ಡಿಟೋ
3 ಆನೆಚವಕೂರು ಡಿಟೋ
4 ಬೂಕಾರೇ ಜಂಗಲ್
5 ಮಾವಕಲ್ ಡಿಟೋ

ಟಿ. ಆನಂದರಾವ್,
ಡೆಪ್ಯೂಟಿ ಕಮ್ಮಿಷನರ್.